15-16

ಸಂ. 1950
12/08/15

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಹಂಚಿಕೆಯಾಗಿರುವ 38.6 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 200 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತು.

ಓದಲಾಗಿದೆ:
1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 447 ಎನ್‌ಸಿಇ 2007 ದಿನಾಂಕ:25.06.2009
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ: KRED/08/GMNWEPL-38.6 to 200 MW/ Bableshwar/2015/574 ದಿನಾಂಕ: 25.2.2015.
3) ಮೆ: ಜಿ.ಎಂ.ನವರ ವಿಂಡ್ ಪ್ರೈ.ಲಿ., ಕಂಪನಿಯು ಸರ್ಕಾರಕ್ಕೆ ದಿನಾಂಕ:27.02.2015 ರಂದು ಸಲ್ಲಿಸಿರುವ ಮನವಿ.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಕಂಪನಿಗೆ, ಬಿಜಾಪುರ, ಗುಲ್ಬರ್ಗಾ, ಬೆಳಗಾವಿ ಮತ್ತು ಚಿತ್ರದುರ್ಗ ಜಿಲ್ಲೆಗಳ ವಿವಿಧ ಪ್ರದೇಶಗಳಲ್ಲಿ 205 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು ಕೆಲವೊಂದು ಷರತ್ತಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ಸದರಿ ಆದೇಶದ ಕ್ರಮ ಸಂಖ್ಯೆ (5) ರಲ್ಲಿ ಬಿಜಾಪುರ ಜಿಲ್ಲೆಯ, ಬಬಲೇಶ್ವರ ಮತ್ತು ಮುಳವಾಡ ಗ್ರಾಮಗಳಲ್ಲಿ ಹಂಚಿಕೆಯಾಗಿರುವ ಅಂಶಿಕ 38.6 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 2000 ಕಿ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸಲು ಹಾಗೂ ಹೆಚ್ಚಳಗೊಳ್ಳುವ ಸಾಮರ್ಥ್ಯವನ್ನು 200 ಮೆ.ವ್ಯಾ. ಸಾಮರ್ಥ್ಯದ 100 ಟರ್ಬೈನ್‌ಗಳನ್ನು ಅಳವಡಿಸಿಕೊಂಡು ಮೂಲ ಹಂಚಿಕೆ ಸ್ಥಳದಲ್ಲಿಯೇ ಅನುಷ್ಠಾನಗೊಳಿಸುವುದಾಗಿ ತಿಳಿಸಿ, ಅಭಿವೃದ್ಧಿದಾರರು DPR ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯನ್ನು ಪರಿಗಣಿಸಬಹುದೆಂದು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತಾ, ಯೋಜನೆಗೆ ಸಂಬಂಧಿಸಿದಂತೆ ಅಭಿವೃದ್ಧಿದಾರರು ಪಾವತಿಸಿರುವ ಸಾಮರ್ಥ್ಯ ಹೆಚ್ಚಳ ಶುಲ್ಕ ಮತ್ತು ಕಾಲಾವಧಿ ವಿಸ್ತರಣಾ ಶುಲ್ಕಗಳ ವಿವರವನ್ನು ಮತ್ತು ಯೋಜನೆಗೆ ಸಂಬಂಧಿಸಿದ ತಾಂತ್ರಿಕ ಮಾಹಿತಿಯೊಂದಿಗೆ ಯೋಜನೆಯನ್ನು ದಿನಾಂಕ: 24.06.2015 ರೊಳಗೆ ಅನುಷ್ಠಾನಗೊಳಿಸುವ ಷರತ್ತಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮೆ: ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಕಂಪನಿಯು ಸರ್ಕಾರಕ್ಕೆ ಮನವಿ ಸಲ್ಲಿಸಿ, ಈ ಸಾಮರ್ಥ್ಯ ಹೆಚ್ಚಳಗೊಳ್ಳುವ ಯೋಜನೆಯ ಅನುಷ್ಠಾನಕ್ಕೆ ಸರ್ಕಾರದಿಂದ ಆದೇಶ ಹೊರಡಿಸಿದ ದಿನಾಂಕದಿಂದ 3 ವರ್ಷಗಳ ಕಾಲಾವಕಾಶವನ್ನು ನೀಡುವಂತೆ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

Wind Section
Inward No. 15688
Date: 14-08-15
Sig.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 32 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 06.08.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಎನ್ 447 ಎನ್‌ಸಿಇ 2007, ದಿನಾಂಕ:25.06.2009 ರಲ್ಲಿ ಮೆ: ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್

--2)

ಕಂಪನಿಗೆ ಹಂಚಿಕೆಯಾಗಿರುವ 205 ಮೆ.ವ್ಯಾ. ಸಾಮರ್ಥ್ಯದ ಪೈಕಿ ಸದರಿ ಆದೇಶ ಭಾಗದ ಕ್ರಮ ಸಂಖ್ಯೆ (5) ರಲ್ಲಿ ಬಿಜಾಪುರ ಜಿಲ್ಲೆಯ ಬಬಲೇಶ್ವರ ಮತ್ತು ಮುಳವಾಡ ಗ್ರಾಮಗಳಲ್ಲಿ ಹಂಚಿಕೆಯಾಗಿರುವ ಅಂಶಿಕ 38.6 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು ಈ ಕೆಳಕಂಡ ಶೆಡ್ಯೂಲ್ ಮತ್ತು ಷರತ್ತಿಗೊಳಪಟ್ಟು 200 ಮೆ.ವ್ಯಾಗೆ ಹೆಚ್ಚಿಸಿ ಆದೇಶಿಸಿದೆ.

| Geographical Area details | Sanctioned capacity in MW | Enhancement proposed in MW | Total capacity in KW |
|---|---|---|---|
| A Proposed location is a ground level plain with higher general elevation and has spread in North west-Southeast direction and is located between Bableshwar & Mulvad Towns. The area appears to be open scrub and has gravel waste. The area has few peaks and is covered in the following Geographical co-ordinates:<br>**Latitude:16°34'7"- 16°40' N**<br>**Longitude: 75°35'- 75°45' E**<br>**Redge peaks: 628, 638, 631, 629, 632, 595, 609, 616 & 627 m Amsl** | 38.6 MW | 161.40 MW | 200 MW |

1 **ಮೆ: ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್** ಕಂಪನಿ ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 **ಮೆ: ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್** ಕಂಪನಿಯು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ / ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

3 **ಮೆ: ಜಿ.ಎಂ.ನವರ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್** ಕಂಪನಿಯು ಸಾಮರ್ಥ್ಯ ಹೆಚ್ಚಳಗೊಂಡ 161.40 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಈ ಆದೇಶದ ದಿನಾಂಕದಿಂದ 3 ವರ್ಷಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು ಮತ್ತು ಮೂಲ ಹಂಚಿಕೆ ಸಾಮರ್ಥ್ಯ 38.6 ಮೆ.ವ್ಯಾ. ಸಾಮರ್ಥ್ಯಕ್ಕೆ ನಿಯಮಾನುಸಾರ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸುವ ಷರತ್ತಿನೊಂದಿಗೆ ದಿನಾಂಕ: 21.06.2017 ರೊಳಗಾಗಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

4 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಮೂಲ ಹಂಚಿಕೆ ಆದೇಶದಲ್ಲಿನ ಮತ್ತು ಯೋಜನೆಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಇತರೆ ಎಲ್ಲಾ ಆದೇಶಗಳಲ್ಲಿನ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

6/8/15

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.